ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ತೆಂಗು ಅಭಿವೃದ್ಧಿ ಮಂಡಳಿಯ ಕಾರ್ಯಗಳ ಕುರಿತು

ಶ್ರೀ ಎಂ. ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

077 (602) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ತೆಂಗು ಅಭಿವೃದ್ಧಿ ಮಂಡಳಿ ಅನುಷ್ಠಾನಕ್ಕೆ ಬಂದಿದ್ದು ಯಾವಾಗ; ತೆಂಗು ಬೆಳೆಗಾರರಿಗೆ ಅನುಕೂಲವಾಗುವ ಹಾಗೆ ಮಂಡಳಿಯು ರೂಪಿಸಿರುವ ಯೋಜನೆಗಳು ಯಾವುವು ;

(ಆ) ಕಳೆದ 5 ವರ್ಷಗಳಲ್ಲಿ ಈ ಮಂಡಳಿಗೆ ಸರ್ಕಾರವು ನೀಡಿದ ಅನುದಾನದ ಮೊತ್ತ ಎಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಇ) ಕಳೆದ 5 ವರ್ಷಗಳಲ್ಲಿ ಈ ಮಂಡಳಿಯಿಂದ ಹಾಸನ ಜಿಲ್ಲೆಗೆ ಬಿಡುಗಡೆಯಾದ ಅನುದಾನವೆಷ್ಟು ; ಈ ಅನುದಾನವನ್ನು ಯಾವ ಯಾವ ಉದ್ದೇಶಗಳಿಗೆ ಬಳಸಲಾಗಿದೆ ; (ವಿವರ ನೀಡುವುದು)

(ಈ) ಹಾಸನ ಜಿಲ್ಲೆಯ ಎಷ್ಟು ಎಕರೆ ಪ್ರದೇಶದಲ್ಲಿ ತೆಂಗು ಬೆಳೆಯಲಾಗುತ್ತಿದೆ ; ಇದರಿಂದ ಬರುತ್ತಿರುವ ವಾರ್ಷಿಕ ಉತ್ಪನ್ನವೆಷ್ಟು ? (ಗ್ರಾಮವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು)